# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1300 (1483) |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 10/03/2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು (ವಿವರ ನೀಡುವುದು) | ಕಾರ್ಮಿಕ ಇಲಾಖೆಯಿಂದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಕಾರ್ಮಿಕ ಕಲ್ಯಾಣಕ್ಕಾಗಿ ಪ್ರತ್ಯೇಕವಾಗಿ ಯಾವುದೇ ಯೋಜನೆಗಳನ್ನು ರೂಪಿಸಿರುವುದಿಲ್ಲ. ಆದರೆ ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಮಂಡಳಿಗಳಿಂದ ಕಾರ್ಮಿಕರ ಕಲ್ಯಾಣಕ್ಕಾಗಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ನೀಡಿರುವ ಸೌಲಭ್ಯಗಳು ಈ ಕೆಳಕಂಡಂತಿದೆ.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br><br>ಈ ಮಂಡಳಿಯ ವತಿಯಿಂದ ರಾಜ್ಯದಾದ್ಯಂತ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮತ್ತು ಅವರ ಅವಲಂಬಿತರಿಗಾಗಿ 19 ವಿವಿಧ ಕಲ್ಯಾಣ ಮತ್ತು ಸಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದ್ದು, ಸೌಲಭ್ಯಗಳ ವಿವರವನ್ನು **ಅನುಬಂಧ-1ರಲ್ಲಿ** ಲಗತ್ತಿಸಿದೆ. ಈ ಸೌಲಭ್ಯಗಳನ್ನು ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ನೋಂದಾಯಿತ ಫಲಾನುಭವಿಗಳಿಗೆ ಸಹ ನೀಡಲಾಗುತ್ತಿದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br><br>ಈ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸುತ್ತಿದೆ.<br><br>(1) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:- ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಿಗೆ ಸಂಬಂಧಪಟ್ಟಂತೆ ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>ಅ) ಅಪಘಾತ ಪರಿಹಾರ ಸೌಲಭ್ಯ : ಈ ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2 ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ. |

(ಆ) ಶೈಕ್ಷಣಿಕ ಧನ ಸಹಾಯ : ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.

(2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-

ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್/ಗುರುತಿನ ಚೀಟಿ ಮಾತ್ರ ವಿತರಿಸಲಾಗುತ್ತಿದೆ. ಯಾವುದೇ ಆರ್ಥಿಕ ಸೌಲಭ್ಯಗಳನ್ನು ನೀಡಲಾಗುತ್ತಿಲ್ಲ.

(3) ಇ-ಶ್ರಮ್ ಕಾರ್ಯಕ್ರಮ:-

ಕೇಂದ್ರ ಸರ್ಕಾರವು ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ದತ್ತಾಂಶ (NDUW-National Database for Unorganised Worker) ಕ್ರೋಢೀಕರಿಸಲು ಉದ್ದೇಶಿಸಿದ್ದು, ಸಾಮಾನ್ಯ ಸೇವಾ ಕೇಂದ್ರಗಳ (CSC) ಸಹಯೋಗದೊಂದಿಗೆ ದಿನಾಂಕ: 26-08-2021 ರಿಂದ ಸುಮಾರು 379 ವರ್ಗಗಳ ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಇ-ಶ್ರಮ್ ಪೋರ್ಟಲ್ ಮೂಲಕ ನೋಂದಾಯಿಸಲಾಗುತ್ತಿದೆ. ಈ ಯೋಜನೆಯಡಿ ನೋಂದಣಿಯಾಗುವ ಕಾರ್ಮಿಕರು ಒಂದು ವರ್ಷದ ಅವಧಿಗೆ ಪ್ರಧಾನ ಮಂತ್ರಿ ಸುರಕ್ಷಾ ಬೀಮಾ ಯೋಜನೆಯಡಿ ರೂ.2.00 ಲಕ್ಷಗಳವರೆಗೆ ಅಪಘಾತ ವಿಮೆಯನ್ನು ಪಡೆಯಬಹುದಾಗಿರುತ್ತದೆ ಹಾಗೂ ಒಂದು ವರ್ಷದ ವಿಮಾ ಪ್ರೀಮಿಯಂ ಮೊತ್ತವನ್ನು ಕೇಂದ್ರ ಸರ್ಕಾರವು ಭರಿಸುವುದು.

ಮೇಲ್ಕಂಡ ಯೋಜನೆಗಳು ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳನ್ನು ಒಳಗೊಂಡಂತೆ ರಾಜ್ಯಾದ್ಯಂತ ಅನ್ವಯಿಸುತ್ತವೆ.

**ಕಾರ್ಮಿಕ ಕಲ್ಯಾಣ ಮಂಡಳಿ:**

ರಾಜ್ಯದ ಎಲ್ಲಾ ಜಿಲ್ಲೆಗಳ ಸಂಘಟಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಈ ಮಂಡಳಿಯಿಂದ ಈ ಕೆಳಗಿನ ಕಲ್ಯಾಣ ಯೋಜನೆಗಳಡಿ ಸೌಲಭ್ಯಗಳನ್ನು ನೀಡಲಾಗುವುದು.

1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ.
2) ಕಾರ್ಮಿಕರಿಗೆ ವೈದ್ಯಕೀಯ ನೆರವು.
3) ಕಾರ್ಮಿಕರಿಗೆ ಅಪಘಾತ ಧನ ಸಹಾಯ.
4) ಹೆರಿಗೆ ಭತ್ಯೆ ಸೌಲಭ್ಯ
5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ
6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ

| | | |
|---|---|---|
| ಆ) | ಸರ್ಕಾರ ರೂಪಿಸಿರುವ ಯೋಜನೆಗಳನ್ನು ಅರ್ಹ ಕಾರ್ಮಿಕರಿಗೆ ತಲುಪಿಸಲು ಅನುಸರಿಸುತ್ತಿರುವ ಕ್ರಮಗಳೇನು (ವಿವರ ನೀಡುವುದು) | **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯು ರೂಪಿಸಿರುವ ವಿವಿಧ ಕಲ್ಯಾಣ ಮತ್ತು ಸಮಾಜಿಕ ಭದ್ರತಾ ಸೌಲಭ್ಯಗಳನ್ನು ಅರ್ಹ ಕಾರ್ಮಿಕರಿಗೆ ವಿತರಿಸಲು ಮತ್ತು ನೋಂದಣಿಯಾಗದೇ ಇರುವ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ನೋಂದಾಯಿಸುವ ನಿಟ್ಟಿನಲ್ಲಿ ರಾಜ್ಯದಾದ್ಯಂತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಕ್ಷೇತ್ರ ಮಟ್ಟದಲ್ಲಿ ಬಳಕೆದಾರರ ಸ್ನೇಹಿ ಸೇವಾ ಸಿಂಧು ತಂತ್ರಾಂಶದ ಮೂಲಕ ಮಂಡಳಿಯ ಫಲಾನುಭವಿಗಳಾಗಿ ನೋಂದಾಯಿಸಲಾಗುತ್ತಿದೆ.<br>ಅಲ್ಲದೇ ಅವರಿಗೆ ನೋಂದಣಿ ಮತ್ತು ಸೌಲಭ್ಯಗಳ ಕುರಿತು ಮಾಹಿತಿ ಪಡೆಯಲು ಉಚಿತ ಸಹಾಯ ವಾಣಿ ಸಂಖ್ಯೆ: 155214 ಅನ್ನು ಸ್ಥಾಪಿಸಲಾಗಿದೆ.<br>ಮುಂದುವರೆದು, ಫಲಾನುಭವಿಗಳ ನೋಂದಣಿ ಮತ್ತು ಅವರಿಗೆ ರೂಪಿಸಿರುವ ಸೌಲಭ್ಯಗಳ ಕುರಿತು ಜಾಗೃತಿ ಮೂಡಿಸಲು ಈ ಕೆಳಕಂಡ ಐಇಸಿ ಚಟುವಟಿಕೆಗಳನ್ನು ರಾಜ್ಯಾದ್ಯಾಂತ ಕೈಗೊಳ್ಳಲಾಗಿದೆ:<br>ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳಡಿಯಲ್ಲಿ ಬಸ್ ಬ್ರ್ಯಾಡಿಂಗ್, ಕೆ.ಎಸ್.ಆರ್.ಟಿ.ಸಿ ಬಸ್ ಸ್ಟ್ಯಾಂಡ್ ಆಡಿಯೋ ಅನೌನ್ಸ್‌ಮೆಂಟ್ಸ್, ಬಿ.ಎಂ.ಟಿ.ಸಿ ಬಸ್ ಸ್ಟ್ಯಾಂಡ್‌ಗಳಲ್ಲಿ ಎಲ್.ಇ.ಡಿಡಿಸ್ಪ್ಲೇ ಮೂಲಕ ಪ್ರಚಾರ, ಬಿ.ಬಿ.ಎಂ.ಪಿ ವ್ಯಾಪ್ತಿಯ ಬಸ್ ಶೆಲ್ಟರ್‌ಗಳ ಬ್ರ್ಯಾಂಡಿಂಗ್, ತಾಲ್ಲೂಕು ಕೇಂದ್ರಗಳಲ್ಲಿ ಗೋಡೆ ಬರಹದ ಮೂಲಕ ಪ್ರಚಾರ, ಸಾಮಾಜಿಕ ಮಾಧ್ಯಮ ಚಟುವಟಿಕೆ, ಜಿಲ್ಲಾಧಿಕಾರಿಗಳ ಕಛೇರಿ ಹಾಗೂ ಕಾರ್ಮಿಕ ಅಧಿಕಾರಿಗಳ ಕಛೇರಿಗಳಲ್ಲಿ ಸನ್ ಬೋರ್ಡ್ ಅಳವಡಿಕೆ, ಮಂಡಳಿಯ ಅಧೀನದಲ್ಲಿರುವ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧೀನದಲ್ಲಿರುವ ಹೋರ್ಡಿಂಗ್ ಪ್ಯಾನೆಲ್‌ಗಳಲ್ಲಿ ಹೋರ್ಡಿಂಗ್ ಅಳವಡಿಕೆ,ಬ್ಯಾನರ್ ಅಳವಡಿಕೆ, ಪೋಸ್ಟರ್ಸ್ ಅಳವಡಿಕೆ, ಮಂಡಳಿಯ ಸೌಲಭ್ಯಗಳ ಮಾಹಿತಿಯನ್ನೊಳಗೊಂಡ 2020-2021 ಮತ್ತು 2021-2022 ನೇ ಸಾಲಿನ ಕ್ಯಾಲೆಂಡರ್‌ಗಳ ಮುದ್ರಣ, ಪಾಂಪ್ಲೆಟ್ಸ್‌ಗಳ ಮುದ್ರಣ, ಪತ್ರಿಕೆಗಳಲ್ಲಿ ಮಾಹಿತಿ ಪ್ರಕಟಣೆ ಮುಂತಾದವುಗಳ ಮೂಲಕ ಪ್ರಚಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿರುತ್ತದೆ<br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>**<br>ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳಡಿ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ವಿತರಿಸಲು ಈ ಕೆಳಕಂಡ ಕ್ರಮಗಳನ್ನು ಅನುಸರಿಸಲಾಗುತ್ತಿದೆ.<br>1. ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-<br>**(ಅ) ಅಪಘಾತ ಪರಿಹಾರ:-**<br>➢ ಪರಿಹಾರ ಮೊತ್ತವನ್ನು ಪಡೆಯಲು ಅಪಘಾತ ಸಂಭವಿಸಿದ ಒಂದು (1) ವರ್ಷದೊಳಗೆ ಮಂಡಳಿಗೆ ಫಲಾನುಭವಿ/ನಾಮನಿರ್ದೇಶಿತರು ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕು. |

- ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ, ಫಲಾನುಭವಿಯ ನಾಮ ನಿರ್ದೇಶಿತರು ಕ್ಲೇಮ್ ಅರ್ಜಿಯ ಜೊತೆಗೆ ಮರಣ ಪ್ರಮಾಣ ಪತ್ರ, ಮರಣೋತ್ತರ ಪರೀಕ್ಷಾ ವರದಿ, ಪ್ರಥಮ ವರ್ತಮಾನ ವರದಿ(ಈಖಖ) ಮತ್ತು ಊರ್ಜಿತ ಚಾಲನಾ ಪರವಾನಗಿಯನ್ನು ಲಗತ್ತಿಸಿ ಸಲ್ಲಿಸಬೇಕು.
- ಅಪಘಾತದಿಂದ ದುರ್ಬಲತೆ ಉಂಟಾದಲ್ಲಿ ಕ್ಲೇಮ್ ಅರ್ಜಿಯ ಜೊತೆಗೆ ಊರ್ಜಿತ ಚಾಲನಾ ಪರವಾನಗಿ/ಬ್ಯಾಡ್ಜ್, ಪ್ರಥಮ ವರ್ತಮಾನ ವರದಿ (FIR) ಮತ್ತು ಒಳರೋಗಿ ಆಸ್ಪತ್ರೆ ವೆಚ್ಚ ಹಿಂಪಡೆಯಲು ವೈದ್ಯಕೀಯ ಪ್ರಮಾಣ ಪತ್ರ/ಬಿಲ್‌ಗಳ ಮೂಲ ಪ್ರತಿಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕು.
- ಸ್ವೀಕರಿಸಿದ ಕ್ಲೇಮ್ ಅರ್ಜಿಯ ದಾಖಲೆಗಳನ್ನು ಪರಿಶೀಲಿಸಿ ಸಂಬಂಧಿಸಿದ ಕಾರ್ಮಿಕ ಇಲಾಖೆಯ ಅಧಿಕಾರಿಗಳಿಂದ ಪರಿಶೀಲನೆ ನಡೆಸಲಾಗುತ್ತಿದೆ.
- ಅರ್ಜಿದಾರರು ಸಲ್ಲಿಸಿದ ದಾಖಲೆಗಳ ಹಾಗೂ ಪರಿಶೀಲನಾ ವರದಿಯ ಆಧಾರದ ಮೇಲೆ ಅರ್ಹರಿದ್ದಲ್ಲಿ, ಪರಿಹಾರದ ಮೊತ್ತವನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.

**(ಆ) ಶೈಕ್ಷಣಿಕ ಧನ ಸಹಾಯ :**

- ಶೈಕ್ಷಣಿಕ ಧನ ಸಹಾಯದ ಅರ್ಜಿಗಳನ್ನು ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಮುಖಾಂತರ ಅಥವಾ ನೇರವಾಗಿ ಮಂಡಳಿಗೆ ಸಲ್ಲಿಸಬಹುದು
- ಸದರಿ ಅರ್ಜಿಗಳನ್ನು ಸಂಬಂಧಿಸಿದ ಕಾರ್ಮಿಕ ಇಲಾಖೆಯ ಅಧಿಕಾರಿಗಳಿಂದ ಪರಿಶೀಲನೆ ನಡೆಸಲಾಗುತ್ತಿದೆ
- ಅರ್ಜಿದಾರರು ಸಲ್ಲಿಸಿದ ದಾಖಲೆಗಳ ಹಾಗೂ ಪರಿಶೀಲನಾ ವರದಿಯ ಆಧಾರದ ಮೇಲೆ ಅರ್ಹರಿದ್ದಲ್ಲಿ, ಶೈಕ್ಷಣಿಕ ಧನ ಸಹಾಯದ ಮೊತ್ತವನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.

**(ಇ) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ ಸ್ಮಾರ್ಟ್ ಕಾರ್ಡ್ ಪಡೆಯುವ ವಿಧಾನ:-**

- ಮಂಡಳಿಯ www.ksuwssb.karnataka.gov.in ಪೋರ್ಟಲ್ ನಿಗದಿತ ಅರ್ಜಿ ನಮೂನೆಯಲ್ಲಿ ಈ ಕೆಳಕಂಡ ಅಗತ್ಯ ದಾಖಲೆಗಳೊಂದಿಗೆ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡುವುದು.
- ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ (ಅಪ್‌ಲೋಡ್ ಮಾಡುವುದು).
- ವಯಸ್ಸಿನ ಪ್ರಮಾಣ ಪತ್ರ (ಶಾಲಾ ದಾಖಲೆ, ಜನನ ಪ್ರಮಾಣ ಪತ್ರ, ಚಾಲನಾ ಪರವಾನಿಗೆ, ಪಾಸ್‌ಪೋರ್ಟ್, ಚುನವಣಾ ಗುರುತಿನ ಚೀಟಿ, ಜನ್ಮ ದಿನಾಂಕ ದಾಖಲಿಸಿದ ಪ್ಯಾನ್ ಕಾರ್ಡ್ ಇವುಗಳಲ್ಲಿ ಯಾವುದಾದರೊಂದು ಪ್ರತಿಯನ್ನು ಅಪ್‌ಲೋಡ್ ಮಾಡುವುದು).

- ಆಧಾರ್ ಕಾರ್ಡ್ ಸಂಖ್ಯೆ
- ಪಡಿತರ ಚೀಟಿ ಸಂಖ್ಯೆ (ಪ್ರತಿಯನ್ನು ಅಪ್‌ಲೋಡ್ ಮಾಡುವುದು).
- ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆ.
- ಬ್ಯಾಂಕ್ ಖಾತೆ ಸಂಖ್ಯೆ, ಬ್ಯಾಂಕ್‌ನ ಹೆಸರು ಹಾಗೂ ಶಾಖೆ ವಿಳಾಸ, ಐ.ಎಫ್.ಎಸ್.ಸಿ ಕೋಡ್ ವಿವರಗಳು ಹಾಗೂ ಬ್ಯಾಂಕ್ ಪಾಸ್ ಪುಸ್ತಕದ ವಿವರ ಪುಟವನ್ನು ಅಪ್‌ಲೋಡ್ ಮಾಡುವುದು.
- ಸದರಿ ಅರ್ಜಿ/ ಮಾಹಿತಿಗಳನ್ನು ಸಂಬಂಧಿಸಿದ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಪರಿಶೀಲನೆ ನಡೆಸಿ ಅರ್ಹರಿದ್ದಲ್ಲಿ ಸ್ಮಾರ್ಟ್‌ಕಾರ್ಡ್ ವಿತರಿಸಲಾಗುವುದು.

**ಕಾರ್ಮಿಕ ಕಲ್ಯಾಣ ಮಂಡಳಿ:**

ಕಲ್ಯಾಣ ಯೋಜನೆಗಳನ್ನು ಅರ್ಹ ಕಾರ್ಮಿಕರಿಗೆ ತಲುಪಿಸಲು ಅನುಸರಿಸುತ್ತಿರುವ ಕ್ರಮಗಳನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ.

ಇ) ಸದರಿ ಜಿಲ್ಲೆಗಳಿಗೆ ಕಳೆದ ಎರಡು ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಖರ್ಚು ಮಾಡಲಾಗಿದೆ (ವಿವರ ನೀಡುವುದು)

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**

ಮಂಡಳಿಗೆ ಸರ್ಕಾರದಿಂದ ಯಾವುದೇ ಅನುದಾನ ಬಿಡುಗಡೆಯಾಗುವುದಿಲ್ಲ.

ವಿವಿಧ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಿಂದ ಸ್ವೀಕೃತವಾಗುವ ಶೆ.1 ರಷ್ಟು ಸುಂಕ ಮೊತ್ತದಿಂದ ಮಂಡಳಿಯ ಫಲಾನುಭವಿಗಳಿಗೆ ವಿವಿಧ ಕಲ್ಯಾಣ ಮತ್ತು ಸಮಾಜಿಕ ಭದ್ರತಾ ಸೌಲಭ್ಯಗಳನ್ನು ವಿತರಿಸಲಾಗುತ್ತಿದೆ.

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**

ಈ ಮಂಡಳಿಯ ಮೂಲಕ ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಜಾರಿಗೊಳಿಸುತ್ತಿರುವ ಯೋಜನೆಗಳಡಿ ಜಿಲ್ಲಾವಾರು ಪ್ರತ್ಯೇಕ ಅನುದಾನ ಹಂಚಿಕೆಯಾಗಿರುವುದಿಲ್ಲ. ಆದರೆ, ಅಸಂಘಟಿತ ಕಾರ್ಮಿಕರ ಅಭಿವೃದ್ಧಿಗಾಗಿ ರಾಜ್ಯಾದ್ಯಂತ ಈ ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳಡಿ ಕಳೆದ ಎರಡು ವರ್ಷಗಳಲ್ಲಿ ರಾಜ್ಯ ಸರ್ಕಾರದಿಂದ ಮಂಡಳಿಗೆ ಬಿಡುಗಡೆಯಾದ ಅನುದಾನ ಮತ್ತು ವೆಚ್ಚದ ವಿವರ ಈ ಕೆಳಗಿನಂತಿದೆ.

(ರೂ. ಲಕ್ಷಗಳಲ್ಲಿ)

| ಯೋಜನೆಯ ಹೆಸರು | 2020-21 | | 2021-22 | |
|---|---|---|---|---|
| | ಬಿಡುಗಡೆ | ವೆಚ್ಚ | ಬಿಡುಗಡೆ | ವೆಚ್ಚ |
| ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | 1.00 | 1001.35 | 1.00 | 871.54 |
| ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಮತ್ತು ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ | 1.00 | 2791.22 | 5.00 | 305.91 |

ಹೆಚ್ಚುವರಿ ವೆಚ್ಚವನ್ನು ಹಿಂದಿನ ಸಾಲುಗಳಲ್ಲಿ ಬಾಕಿ ಉಳಿದ ಅನುದಾನದಿಂದ ಭರಿಸಿದೆ.

ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳಡಿ ಕಳೆದ ಎರಡು ವರ್ಷಗಳಲ್ಲಿ ಸೌಲಭ್ಯ ವಿತರಿಸಲು ಮಾಡಿದ ವೆಚ್ಚದ ವಿವರ ಈ ಕೆಳಗಿನಂತಿದೆ.

1. **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಅಪಘಾತ ಪರಿಹಾರ:-**

ಕಲಬುರಗಿ ಜಿಲ್ಲೆಯಲ್ಲಿ 05 ಅಪಘಾತ ಪ್ರಕರಣಗಳಲ್ಲಿ ರೂ.25.00 ಲಕ್ಷ ಹಾಗೂ ಯಾದಗಿರಿ ಜಿಲ್ಲೆಯಲ್ಲಿ 01 ಅಪಘಾತ ಪ್ರಕರಣದಲ್ಲಿ ರೂ.5.00 ಲಕ್ಷಗಳ ಮರಣ ಪರಿಹಾರವನ್ನು ನಾಮ ನಿರ್ದೇಶಿತರಿಗೆ ವಿತರಿಸಲಾಗಿದೆ.

2. **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**

ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಲಾಗುತ್ತಿದ್ದು, ಕಲಬುರಗಿ ಜಿಲ್ಲೆಯಲ್ಲಿ 3845 ಕಾರ್ಮಿಕರು ಹಾಗೂ ಯಾದಗಿರಿ ಜಿಲ್ಲೆಯಲ್ಲಿ 2102 ಕಾರ್ಮಿಕರು ನೋಂದಾಯಿತರಾಗಿರುತ್ತಾರೆ. ಆದರೆ, ಯಾವುದೇ ಆರ್ಥಿಕ ಸೌಲಭ್ಯವನ್ನು ಒದಗಿಸುತ್ತಿರುವುದಿಲ್ಲ.

**3.ಕೋವಿಡ್-19 ರ ವಿಶೇಷ ಪ್ಯಾಕೇಜ್:**

| ವಿವರ | ಕಲಬುರಗಿ | | ಯಾದಗಿರಿ | |
|---|---|---|---|---|
| | ಕಾರ್ಮಿಕರ ಸಂಖ್ಯೆ | ನೆರವಿನ ಮೊತ್ತ ರೂ.ಗಳಲ್ಲಿ | ಕಾರ್ಮಿಕರ ಸಂಖ್ಯೆ | ನೆರವಿನ ಮೊತ್ತ ರೂ.ಗಳಲ್ಲಿ |
| ಮೊದಲನೇ ಅಲೆ:- (ಅಗಸರು ಮತ್ತು ಕ್ಷೌರಿಕರು) (ತಲಾ ರೂ.5000 ಗಳ ನೆರವು) | 5233 | 2,61,65,000 | 3086 | 1,54,30,000 |
| ಎರಡನೇ ಅಲೆ:- 11 ಅಸಂಘಟಿತ ವರ್ಗಗಳಾದ (ಹಮಾಲರು, ಟೈಲರ್ಸ್, ಮನೆಗೆಲಸದವರು, ಚಿಂದಿ ಆಯುವವರು, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿಕಾರ್ಮಿಕರು) (ತಲಾ ರೂ.2000ಗಳ ನೆರವು) | 78934 | 15,78,68,000 | 22714 | 4,54,28,000 |
| ಒಟ್ಟು ನೆರವು | | **18,40,33,000** | | **6,08,58,000** |

ಸರ್ಕಾರದಿಂದ ಅನುದಾನವನ್ನು ಒಟ್ಟಾರೆಯಾಗಿ ಬಿಡುಗಡೆ ಮಾಡುತ್ತಿದ್ದು ಕಳೆದ ಎರಡು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನದ ವಿವರಗಳು ಕೆಳಕಂಡಂತಿದೆ.

(ರೂ. ಕೋಟಿಗಳಲ್ಲಿ)

| ಕ್ರ. ಸಂ. | ವರ್ಷ | ಸರ್ಕಾರದಿಂದ ಬಿಡುಗಡೆಯಾದ ವಂತಿಕೆ ಮೊತ್ತ |
|---|---|---|
| 1 | 2019–20 | 7.18 |
| 2 | 2020–21 | 6.00 |

ಮೇಲ್ಕಂಡಂತೆ ಬಿಡುಗಡೆಯಾಗಿರುವ ಅನುದಾನವನ್ನು ಸಂಘಟಿತ ಕಾರ್ಮಿಕರ ವಿವಿಧ ಕಲ್ಯಾಣ ಯೋಜನೆಗಳಿಗಾಗಿ ವೆಚ್ಚ ಮಾಡಲಾಗಿದ್ದು ವಿವರಗಳನ್ನು ಅನುಬಂಧ–3 ಮತ್ತು 4 ರಲ್ಲಿ ಒದಗಿಸಲಾಗಿದೆ.

**ಕಾಇ 152 ಎಲ್‌ಇಟಿ 2022**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

# ಅನುಬಂಧ-1

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಿ. ಜಿ. ಪಾಟೀಲ್

## ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1483ಕ್ಕೆ

**ಮಂಡಳಿಯ ವತಿಯಿಂದ ಅನುಷ್ಠಾನಗೊಳಿಸಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳು;**

**ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಸಹಾಯ ಧನ ನೀಡಲು ಈ ಕೆಳಕಂಡ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.2,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್ ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆರೂ. **30,000/-** ಮತ್ತು ಗಂಡು ಮಗುವಿನ ಜನನಕ್ಕೆ **ರೂ.20,000/-**
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ(ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು |

| | | |
|---|---|---|
| ತಾಂತ್ರೀಕ/ ವೈದ್ಯಕೀಯ ಎನ್ ಇ ಇ ಟಿ ಅಥವಾ ಕೆ ಸಿ ಇ ಟಿ | | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂ.ಜಿ. ಸಿ ಕೋರ್ಸ್ | ಸದರಿ ಕೋರ್ಸ್‌ಗಳಿಗೆ ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ಎಸ್ / ಬಿಡಿಎಸ್ /ಬಿಹೆಚ್ಎಮ್ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | ರೂ.60,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ ಕೋರ್ಸ್‌ನಗರಿಷ್ಠ ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ/ ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000 (ಯೂಜಿಸಿಯ ಜೂನಿಯರ್ ರಿಸರ್ಚ್ ಫೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ ಮತ್ತು ರಾಜ್ಯ /ಕೇಂದ್ರ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |

12. ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ): ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ ರೂ.300/- ರಿಂದ ರೂ.10,000/-ವರೆಗೆ

13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ **ರೂ.5,00,000/-**, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/-** ಮತ್ತು ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-** ವರೆಗೆ.
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**
16. ಮಂಡಳಿಯ ಫಲಾನುಭವಿಗಳ ಮಕ್ಕಳು ಐಎಎಸ್/ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸಲು ತರಬೇತಿ.
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/-** ಗಳ ಸಹಾಯ ಧನ.

## ಅನುಬಂಧ-2

### ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1483

ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕರ ಕಲ್ಯಾಣವನ್ನು ಸಂವರ್ಧನಗೊಳಿಸುವುದಕ್ಕೆ ಹಣಕಾಸು ನೆರವು ಒದಗಿಸಲು ಮತ್ತು ಚಟುವಟಿಕೆಗಳನ್ನು ನಡೆಸುವುದಕ್ಕಾಗಿ ಒಂದು ನಿಧಿಯನ್ನು, ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ, 1965ರ ಅಡಿಯಲ್ಲಿ ಸ್ಥಾಪಿಸಲಾಗಿದೆ. ಮಂಡಳಿಗೆ ವಂತಿಗೆ ಪಾವತಿಸುವ ವಿವಿಧ ಕ್ಷೇತ್ರಗಳಾದ ಕಾರ್ಖಾನೆಗಳು/ಸಂಸ್ಥೆಗಳು/ಪ್ಲಾಂಟೇಶನ್/ಸಾರಿಗೆ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರ ಕ್ಷೇಮಾಭಿವೃದ್ಧಿಗಾಗಿ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಈ ಕೆಳಗಿನ ಯೋಜನೆಗಳು ಜಾರಿಯಲ್ಲಿರುತ್ತದೆ.

**ಸೂಚನೆ :**

1. ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ವರ್ಷ ಜನವರಿ 15 ರೊಳಗೆ ಕಾರ್ಮಿಕರು, ಮಾಲೀಕರು ರೂ. 20 : 40 ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ಒಟ್ಟು ರೂ. 60/- ಗಳಂತೆ ವಂತಿಕೆಯನ್ನು ಕಾರ್ಮಿಕ ಕಲ್ಯಾಣ ನಿಧಿಗೆ ಪಾವತಿಸತಕ್ಕದ್ದು.
2. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಪಡೆಯಲು ವಿದ್ಯಾರ್ಥಿಗಳು, ಶೈಕ್ಷಣಿಕ ಸಂಸ್ಥೆಗಳು, ಕಾರ್ಖಾನೆಗಳು/ಸಂಸ್ಥೆಗಳು www.klwb.karnataka.gov.in ಇಲ್ಲಿ ನೊಂದಾಯಿಸಿ ಅನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ.
3. ವಂತಿಕೆ ಪಾವತಿ ಮಾಡುವ ಸಂಸ್ಥೆಗಳು ಹಾಗೂ ಕಾರ್ಖಾನೆಗಳು www.klwb.karnataka.gov.in ಇಲ್ಲಿ ತಮ್ಮ ಸಂಸ್ಥೆಗಳನ್ನು ನೊಂದಾಯಿಸಿ ವಂತಿಕೆ ಪಾವತಿ ಮಾಡಬೇಕಾಗಿರುತ್ತದೆ.

**ಈ ಕೆಳಗಿನ ಯೋಜನೆಗಳಿಗೆ ಮಾಸಿಕ ವೇತನ ರೂ. 21,000/- ಗಿಂತ ಮೀರಿರಬಾರದು. ವಯೋಮಿತಿ 18- 60 ವರ್ಷ**

1. **ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ:** ಪ್ರೌಢ ಶಾಲೆ, (8 ರಿಂದ 10ನೇ ತರಗತಿವರೆಗೆ) ರೂ.3,000/ ಪಿಯುಸಿ/ಡಿಪ್ಲೊಮಾ/ಐಟಿಐ/ಟಿಸಿಹೆಚ್ ಶಿಕ್ಷಣಕ್ಕಾಗಿ ರೂ.4,000/-ಪದವಿ ಶಿಕ್ಷಣಕ್ಕಾಗಿ ರೂ.5,000/ ಸ್ನಾತಕೋತ್ತರ ಶಿಕ್ಷಣಕ್ಕಾಗಿ ರೂ.6,000/- ಇಂಜನೀಯರಿಂಗ್/ವೈದ್ಯಕೀಯ ಶಿಕ್ಷಣಕ್ಕಾಗಿ ರೂ.10,000/-ಗಳ ಪ್ರೋತ್ಸಾಹ ಧನ ನೀಡಲಾಗುವುದು.**(ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾ / ಪ.ಪಂಗಡದ ವಿದ್ಯಾರ್ಥಿಗಳು ಶೇ. 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು)**

2. **ಕಾರ್ಮಿಕರಿಗೆ ವೈದ್ಯಕೀಯ ನೆರವು :** ಹೃದಯ ಶಸ್ತ್ರಚಿಕಿತ್ಸೆ, ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್, ಕ್ಯಾನ್ಸರ್, ಆಂಜಿಯೋಪ್ಲಾಸ್ಟಿ, ಕಣ್ಣು, ಅರ್ಥೋಪೆಡಿಕ್, ಗರ್ಭಕೋಶದ ಶಸ್ತ್ರ ಚಿಕಿತ್ಸೆ, ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ ಚಿಕಿತ್ಸೆಗೆ ಕನಿಷ್ಠ ರೂ. 1,000/-ದಿಂದ ಗರಿಷ್ಠ ರೂ.25,000/-ವರೆಗೆ ಮತ್ತು ಆರೋಗ್ಯ ತಪಾಸಣೆಗೆ ರೂ. 500/-ರಿಂದ ರೂ. 1000/-ವರೆಗೆ ಧನ ಸಹಾಯ ನೀಡಲಾಗುವುದು.

3. **ಕಾರ್ಮಿಕರಿಗೆ ಅಪಘಾತ ಧನ ಸಹಾಯ :** ಕಾರ್ಮಿಕರಿಗೆ ಕೆಲಸದ ವೇಳೆಯಲ್ಲಿ ಅಪಘಾತವಾದಲ್ಲಿ ಕನಿಷ್ಠ ರೂ. 1,000/- ಗರಿಷ್ಠ ರೂ. 10,000/- ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

4. **ಹೆರಿಗೆ ಭತ್ಯೆ ಸೌಲಭ್ಯ :** ಮಹಿಳಾ ಕಾರ್ಮಿಕರಿಗೆ ಮೊದಲ 2 ಮಕ್ಕಳಿಗೆ ಮಾತ್ರ ಹೆರಿಗೆ ಭತ್ಯೆ ಸೌಲಭ್ಯವನ್ನು ತಲಾ ರೂ. 10,000/- ಧನ ಸಹಾಯ ನೀಡಲಾಗುವುದು. ಮಗು ಜನಿಸಿದ 6 ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

**ಈ ಕೆಳಗಿನ ಯೋಜನೆಗಳಿಗೆ ಮಾಸಿಕ ಸಂಬಳದ ಮಿತಿಯಿರುವುದಿಲ್ಲ. ವಯೋಮಿತಿ 18- 60**

5. **ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ :**ಈ ಯೋಜನೆಯ ಸೌಲಭ್ಯ ಪಡೆಯಲು ಮೃತರ ಕುಟುಂಬದ ಅವಲಂಬಿತರು ಕಾರ್ಮಿಕ ಮೃತಪಟ್ಟ ಆರು ತಿಂಗಳೊಳಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ, ರೂ. 10,000/- ಧನ ಸಹಾಯ ನೀಡಲಾಗುವುದು.

6. **ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ :** ನೋಂದಾಯಿತ ಕಾರ್ಮಿಕ ಸಂಘಟನೆಗಳು/ಸರ್ಕಾರೇತರ ಸಂಸ್ಥೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೊಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ ರೂ. 1,00,000/- ಧನ ಸಹಾಯ ನೀಡಲಾಗುವುದು.

7. **ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ :** ನೋಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಂಡಲ್ಲಿ ರೂ. 1,00,000/- ಧನ ಸಹಾಯ ನೀಡಲಾಗುವುದು.

# ಅನುಬಂಧ–3

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1483

2019–20 ಮತ್ತು 2020–21ನೇ ಸಾಲಿನಲ್ಲಿ ಕಲ್ಯಾಣ ಯೋಜನೆಗಳಡಿ ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರಿಗೆ ನೀಡಿರುವ ವಿವಿಧ ಸೌಲಭ್ಯಗಳ ವಿವರ ಈ ಕೆಳಕಂಡಂತಿರುತ್ತದೆ.

| | ವರ್ಷ | 2019-20 | | 2020-21 | |
|---|---|---|---|---|---|
| ಕ್ರಸಂ | ಯೋಜನೆಗಳ ವಿವರ | ಫಲಾನುಭವಿ ಸಂಖ್ಯೆ | ಮೊತ್ತ (ರೂ.ಗಳಲ್ಲಿ) | ಫಲಾನುಭವಿ ಸಂಖ್ಯೆ | ಮೊತ್ತ (ರೂ.ಗಳಲ್ಲಿ) |
| 1 | ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ | 26,257 | 10,51,98,000 | 13,729 | 6,01,48,000 |
| 2 | ವೈದ್ಯಕೀಯ ನೆರವು. | 5 | 45,252 | 7 | 70,000 |
| 3 | ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ. | 295 | 14,75,000 | 387 | 19,35,000 |
| 4 | ಕಾರ್ಮಿಕರ ಅಪಘಾತ ಧನ ಸಹಾಯ | – | – | 3 | 6,03,000 |
| 5 | ಅಂಗವಿಕಲ ಕಾರ್ಮಿಕರಿಗೆ ಕೃತಕ ಅಂಗಸಾಧನ ಖರೀದಿಸಲು ಧನ ಸಹಾಯ | – | – | – | – |
| 6 | ವೈದ್ಯಕೀಯ ತಪಾಸಣಾ ಶಿಬಿರ | 400 (2 ಸಂಘಟನೆ) | 60,000 | 401 (2ಸಂಘಟನೆ) | 60,000 |
| 7 | ವಾರ್ಷಿಕ ಕ್ರೀಡಾ ಚಟುವಟಿಕೆ | 600 (2 ಸಂಘಟನೆ) | 1,00,000 | – | – |
| | **ಒಟ್ಟು** | **27,557** | **10,68,78,252** | **14,527** | **6,28,16,000** |

# ಅನುಬಂಧ-4

## ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1483

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಕಲ್ಯಾಣ ಯೋಜನೆಗಳಿಗೆ ಕಳೆದ 2 ವರ್ಷಗಳಲ್ಲಿ ವೆಚ್ಚ ಮಾಡಲಾದ ವರ್ಷವಾರು ಮತ್ತು ಜಿಲ್ಲಾವಾರು ವಿವರಗಳು;-

| ಕ್ರ ಸಂ. | ಜಿಲ್ಲೆ | 2019-20 | | 2020-21 | |
|---|---|---|---|---|---|
| | | ಫಲಾನುಭವಿಗಳು | ಮೊತ್ತ | ಫಲಾನುಭವಿಗಳು | ಮೊತ್ತ |
| 1 | ಕಲಬುರ್ಗಿ | 37 | 1,80,000 | 39 | 1,91,000 |
| 2 | ಯಾದಗಿರಿ | 6 | 37,000 | 33 | 1,51,000 |